ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 256
ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 21-09-2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಬೆಳಗಾವಿ ವಿಭಾಗದಲ್ಲಿನ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ಸಂಸ್ಥೆಗಳ ಹೆಸರಿನೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)	ಬೆಳಗಾವಿ ವಿಭಾಗದಲ್ಲಿನ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ:679. ಬೆಳಗಾವಿ ವಿಭಾಗದಲ್ಲಿನ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳ ಸಂಖ್ಯೆ:214. ಕಾಲೇಜುಗಳ ವಿವರವನ್ನು ಅನುಬಂಧದಲ್ಲಿ ಸಲ್ಲಿಸಿದೆ.
ಆ)	ಸದರಿ ಹುದ್ದೆಗಳು ಯಾವ ವರ್ಷಗಳಿಂದ ಖಾಲಿ ಇವೆ:	ರಾಜ್ಯದ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಲ್ಪಟ್ಟ ಬೋಧಕ ಹುದ್ದೆಗಳಿಗೆ ಸರ್ಕಾರವು ವಿವಿಧ ಆದೇಶಗಳ ಮೂಲಕ ದಿನಾಂಕ31-12-2015ರ ಅಂತ್ಯದವರೆಗೆ ನಿಗದಿತ ಕಾರ್ಯಭಾರ ಇರುವ ಹುದ್ದೆಗಳಿಗೆ ಆರ್ಥಿಕ ಮಿತವ್ಯಯವನ್ನು ಸಡಿಲಿಸಿದೆ. 01-01-2016 ರಿಂದ ತೆರವಾದ ಬೋಧಕ ಹುದ್ದೆಗಳು ಪ್ರಸ್ತುತದವರೆಗೂ ಖಾಲಿ ಇವೆ. ವಿವಿಧ ಕಾರಣಗಳಿಂದ ತೆರವಾದ ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಆರ್ಥಿಕ ಮಿತವ್ಯಯ ಜಾರಿಯಲ್ಲಿದೆ.
ಇ)	ಸದರಿ ಹುದ್ದೆಗಳು ನೇಮಕಾತಿ ಮಾಡಿಕೊಳ್ಳಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು:	ಆರ್ಥಿಕ ಮಿತವ್ಯಯವನ್ನು ಸಡಿಲಿಸಿದ ಹುದ್ದೆಗಳಿಗೆ ಆಡಳಿತ ಮಂಡಳಿಗಳಿಂದ ಸ್ವೀಕೃತಗೊಂಡ ಪ್ರಸ್ತಾವನೆಗಳಿಗೆ ನಿಯಮಾನುಸಾರ ಹುದ್ದೆಗಳಿಗೆ ಇರುವ ನಿಗದಿತ ಕಾರ್ಯಭಾರವನ್ನು ಹಾಗೂ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಮತ್ತು ದ್ವಿತೀಯ ಪಿಯುಸಿ ಫಲಿತಾಂಶವನ್ನು ಪರಿಗಣನೆಗೆ ತೆಗೆದುಕೊಂಡು ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರವಾದ ಆಡಳಿತ ಮಂಡಳಿಯು ಈ ಹಿಂದೆ

		ಮಾಡಿಕೊಂಡಿರುವ ನೇಮಕಾತಿಗಳಲ್ಲಿ ಮೀಸಲಾತಿಯನ್ನು ಪರಿಶೀಲಿಸಿ ನಂತರ ರಿಕ್ತಸ್ಥಾನಗಳಲ್ಲಿ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗುತ್ತಿದೆ. ಕೆಲವು ಆಡಳಿತ ಮಂಡಳಿಗಳ ಹುದ್ದೆಗಳ ಪ್ರಕರಣಗಳು ನ್ಯಾಯಾಲಯದ ವಿಚಾರಣಾ ಹಂತದಲ್ಲಿವೆ. ಹೀಗಾಗಿ ಪ್ರತಿಯೊಂದು ಅಂಶವನ್ನು ಕೂಲಂಕಷವಾಗಿ ಪರಿಶೀಲಿಸಿ ಅನುಮತಿ ನೀಡುವ ಬಗ್ಗೆ ಕ್ರಮ ಜರುಗಿಸಲಾಗುತ್ತಿದೆ.
ಈ)	ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು?	ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020 ದಿನಾಂಕಃ 10-06-2020ರಲ್ಲಿ ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಯಾವುದೇ ಕಾರಣಗಳಿಂದ ಖಾಲಿ ಉಂಟಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲವೆಂದು ಹಾಗೂ ಸದರಿ ನಿಯಮವು ಈಗಾಗಲೇ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿಸಿರುವ ಪ್ರಕರಣಗಳಿಗೂ ಸಹ ಅನ್ವಯಿಸತಕ್ಕದೆಂದು ಹಾಗೂ 2020-21ನೇ ಸಾಲಿನಲ್ಲಿ ಯಾವುದೇ ಹೊಸ ಅನುದಾನ ರಹಿತ ವಿದ್ಯಾಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸುವಂತಿಲ್ಲವೆಂದು ರಾಜ್ಯದಲ್ಲಿ ಆರ್ಥಿಕ ಮಿತವ್ಯಯವನ್ನು ಜಾರಿಗೊಳಿಸಿದೆ. ನೇಮಕಾತಿಗಳಿಗೆ ವಿಧಿಸಿರುವ ನಿರ್ಬಂಧ ತೆರವಾದ ಕೂಡಲೇ ಆಯ್ಕೆ ಪ್ರಕ್ರಿಯೆ ಪ್ರಾರಂಭಿಸಲಾಗುವುದು.

ಸಂಖ್ಯೆ: ಇಪಿ 119 ಡಿಜಿಡಬ್ಲ್ಯೂ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಪ್ರಶ್ನೆಸಂಖ್ಯೆ 256

ಕ್ರ.ಸಂ	ಜಿಲ್ಲೆಯ ಹೆಸರು	ಬೋಧಕ ಹುದ್ದೆಗಳ ಸಂಖ್ಯೆ	ಬೋಧಕೇತರ ಹುದ್ದೆಗಳ ಸಂಖ್ಯೆ
01	ಬೆಳಗಾವಿ	53	19
02	ಚಿಕ್ಕೋಡಿ	138	54
03	ವಿಜಯಪುರ	90	83
04	ಧಾರವಾಡ	52	06
05	ಗದಗ	83	16
06	ಹಾವೇರಿ	123	12
07	ಉತ್ತರ ಕನ್ನಡ	35	21
08	ಬಾಗಲಕೋಟೆ	105	03
ಒಟ್ಟು		679	214

Jt ಜಂಟಿ ನಿರ್ದೇಶಕರು(ಮಾ&ಅ)(ಪ್ರ)
ಪದವಿ ಪೂರ್ವ ಶಿಕ್ಷಣ ಇಲಾಖೆ.